# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 185 ರಲ್ಲಿ ಘೋಷಿಸಿರುವಂತೆ "ಸರ್ಕಾರಿ /ಖಾಸಗಿ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್ /ಜಿ.ಎನ್.ಎಂ ನರ್ಸಿಂಗ್ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕ ಭರಿಸುವ ಯೋಜನೆಯನ್ನು ಪುನಃ ಪ್ರಾರಂಭ ಮಾಡಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:**
1. 2024-25ನೇ ಸಾಲಿನ ಜುಲೈ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ-185.
2. ಸರ್ಕಾರದ ಆದೇಶ ಸಂಖ್ಯೆ:MWD 205 MDS 2016 ದಿ:26/10/2018
3. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 175 ವೆಚ್ಚ-3/2024 ದಿನಾಂಕ23/04/2024
4. ಅಲ್ಪಸಂಖ್ಯಾತರ ನಿರ್ದೇಶನಾಲಯದ ಇ-ಕಚೇರಿ ಕಡತ ಸಂಖ್ಯೆ: DOM/SCH/OTH/3/2024-

** ** **

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 185 ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.

**"ಸರ್ಕಾರಿ /ಖಾಸಗಿ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್ /ಜಿ.ಎನ್.ಎಂ ನರ್ಸಿಂಗ್ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕ ಭರಿಸುವ ಯೋಜನೆಯನ್ನು ಪುನಃ ಪ್ರಾರಂಭ ಮಾಡಲಾಗುವುದು"**

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿನ ಆದೇಶದಲ್ಲಿ 2016-17 ನೇ ಸಾಲಿನಿಂದ ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕೋರ್ಸ್ ಗಳನ್ನು ಅಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ.35.000/- ಗಳ ಪ್ರೋತ್ಸಾಹಧನವನ್ನು ಪ್ರತಿವರ್ಷ(ಕೋರ್ಸ್ ಮುಗಿಯುವರೆಗೂ)ನೀಡಲು ಆದೇಶಿಸಲಾಗಿದೆ.

2024-25ನೇ ಸಾಲಿನ ಆಯವ್ಯದ ಲೆಕ್ಕಶೀರ್ಷಿಕೆ 2225-04-277-0-04- ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ(117-ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹ-14000.00 ಲಕ್ಷಗಳು) ರಡಿ ಒದಗಿಸಿರುವ ಅನುದಾನದಲ್ಲಿ ವೆಚ್ಚಭರಿಸಿ ಈ ಯೋಜನೆಯನ್ನು ಮರುಪ್ರಾರಂಭಿಸಲು ಕ್ರಮವಹಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ:(3) ರ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ತಿಳಿಸಲಾಗಿರುತ್ತದೆ.

2024-25 ನೇ ಸಾಲಿನ ಜುಲೈ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 185 ರಲ್ಲಿ ಘೋಷಿಸಿರುವಂತೆ, ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಆರ್ಥಿಕ

..2.

Scanned with OKEN Scanner

ಸೌಲಭ್ಯಗಳನ್ನು ನೀಡಲು ಗರಿಷ್ಠ ರೂ.25,000/-ಗಳ ಉತ್ತೇಜನ ಮೊತ್ತವನ್ನು ಪ್ರತಿ ವರ್ಷ (ಕೋರ್ಸ್ ಮುಗಿಯುವ ವರೆಗೆ) ನೀಡಲು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸೂಕ್ತ ಸರ್ಕಾರಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿನ ಏಕ ಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 204 ಎಂಡಿಎಸ್ 2024, ದಿನಾಂಕ:07.06.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯದ ಕಂಡಿಕೆ-185ರಲ್ಲಿ ಘೋಷಿಸಿರುವಂತೆ ಸರ್ಕಾರಿ /ಖಾಸಗಿ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್ /ಜಿ.ಎನ್.ಎಂ ನರ್ಸಿಂಗ್ ಕೋರ್ಸ‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕ ಭರಿಸುವ ಯೋಜನೆಯನ್ನು ಪ್ರಸಕ್ತ ಸಾಲಿನಿಂದ ಪುನಃ ಪ್ರಾರಂಭಿಸಿ ಪ್ರತಿ ಅಲ್ಪಸಂಖ್ಯಾತ ವಿದ್ಯಾರ್ಥಿಗೆ ಗರಿಷ್ಠ ರೂ.25,000/-ಗಳ ಉತ್ತೇಜನ ಮೊತ್ತವನ್ನು ಪ್ರತಿ ವರ್ಷ (ಕೋರ್ಸ್ ಮುಗಿಯುವವರೆಗೆ) ನೀಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

**<u>ಷರತ್ತುಗಳು:</u>**

1. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.
2. ಸದರಿ ಕೋರ್ಸಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ ಅನುದಾನವನ್ನು ನೀಡಲಾಗುವುದು.
3. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.2.50ಲಕ್ಷ ಮೀರಿರಬಾರದು.
4. ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು.
5. ಆಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅಭ್ಯರ್ಥಿಗಳ ಸಂಖ್ಯೆ ನಿಗದಿಪಡಿಸಿಕೊಳ್ಳತಕ್ಕದ್ದು.
6. ಸದರಿ ವಿದ್ಯಾರ್ಥಿಗಳು ಭಾರತ ಸರ್ಕಾರದ ವಿದ್ಯಾರ್ಥಿವೇತನ ಪಡೆಯಬಹುದು.
7. ಸದರಿ ವಿದ್ಯಾರ್ಥಿಗಳು ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು.
8. ವಿದ್ಯಾರ್ಥಿಗಳು ನರ್ಸಿಂಗ್ ತರಬೇತಿ ಪಡೆಯುತ್ತಿರುವ ಬಗ್ಗೆ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಸಂಬಂಧಪಟ್ಟ ಸಂಸ್ಥೆ/ಕಾಲೇಜುಗಳಿಂದ ಅಧಿಕೃತ ಎಲ್ಲಾ ದಾಖಲಾತಿಗಳನ್ನು ಪಡೆಯತಕ್ಕದ್ದು.
9. ಸದರಿ ಉತ್ತೇಜನ ಮೊತ್ತವನ್ನು ಪಡೆಯಲು ಹಿಂದಿನ ವರ್ಷದ ಪರೀಕ್ಷೆಯಲ್ಲಿ ಕನಿಷ್ಠ 50% ಅಂಕಗಳು ಪಡೆದಿರಬೇಕು. ಒಂದು ವೇಳೆ ಅನುದಾನದ ಲಭ್ಯತೆ ಇದ್ದಲ್ಲಿ 50% ಕಿಂತ ಕಡಿಮೆ ಅಂಕ ಗಳಿಸಿರುವ ವಿದ್ಯಾರ್ಥಿಗಳ ಅರ್ಜಿಗಳನ್ನು ಸಹ ಮೆರಿಟ್ ಆಧಾರದ ಮೇಲೆ ಸದರಿ ಯೋಜನೆಯಡಿ ಪರಿಗಣಿಸಬಹುದು.
10. ಇಂಡಿಯನ್ ನರ್ಸಿಂಗ್ ಕೌನ್ಸಿಲ್ (ಐ.ಎನ್.ಸಿ) ಮಾನ್ಯತೆ ಪಡೆದ ಶಾಲೆ/ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.
11. ಪ್ಯಾರಾ ಮೆಡಿಕಲ್ ಕಾಲೇಜುಗಳು ಪ್ಯಾರಾಮೆಡಿಕಲ್ ಬೋರ್ಡಿನಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.

..3.

Scanned with OKEN Scanner

12. ಸದರಿ ಯೋಜನೆಯಡಿ ಮೊದಲನೇ ವರ್ಷ ಆಯ್ಕೆಯಾದ ಅಭ್ಯರ್ಥಿಗಳು ನಂತರದ ವರ್ಷಗಳಲ್ಲಿ ಪ್ರತಿ ವರ್ಷ ಅರ್ಜಿ ಸಲ್ಲಿಸತಕ್ಕದ್ದು.
13. ಸುಳ್ಳು ಮಾಹಿತಿ/ ಜಾತಿ ಪ್ರಮಾಣ ಪತ್ರ ನೀಡಿ ಪ್ರವೇಶ/ ತರಬೇತಿ ಭತ್ಯೆ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳ ತರಬೇತಿಗೆ ನೀಡಲಾದ ಮೊತ್ತವನ್ನು ದಂಡದೊಂದಿಗೆ ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.
14. ಯಾವುದೇ ವಿದ್ಯಾರ್ಥಿ ನರ್ಸಿಂಗ್ ವ್ಯಾಸಂಗ ಪೂರ್ಣಗೊಳಿಸದೇ ಮಧ್ಯದಲ್ಲಿ ವ್ಯಾಸಂಗ ಮೊಟಕುಗೊಳಿಸಿದ್ದಲ್ಲಿ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರು ವಿಚಾರಣೆ ನಡೆಸಿ ಇಲಾಖೆಯ ಮುಖ್ಯಸ್ಥರಿಗೆ ವರದಿ ಸಲ್ಲಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಇಲಾಖಾ ಮುಖ್ಯಸ್ಥರು ಅಂತಿಮ ನಿರ್ಣಯ ತೆಗೆದುಕೊಳ್ಳುವುದು. ಒಂದು ವೇಳೆ ಸಮಂಜಸವಾದ ಕಾರಣವಿಲ್ಲದಿದ್ದಲ್ಲಿ ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.
15. ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಮಂಜೂರು ಮಾಡಿ ವಿತರಿಸುವ ಅಧಿಕಾರ ಹೊಂದಿರುತ್ತಾರೆ. ಈ ರೀತಿ ನಿಯೋಜಿಸುವ ಅಭ್ಯರ್ಥಿಗಳ ಮೂಲ ಅರ್ಜಿಗಳಲ್ಲದೆ ಶಾಲಾ ಕಾಲೇಜುಗಳ ವಿವರ ಹಾಗೂ ಇತರ ಮಾಹಿತಿಯನ್ನು ಪ್ರತ್ಯೇಕ ರಿಜಿಸ್ಟರ್ ನಲ್ಲಿ ನಿರ್ವಹಿಸತಕ್ಕದ್ದು. ಈ ರಿಜಿಸ್ಟರನ್ನು ರಾಜ್ಯ ಮಟ್ಟದ ಅಧಿಕಾರಿಗಳು ತಪಾಸಣೆ ವೇಳೆಯಲ್ಲಿ ಪರಿಶೀಲಿಸತಕ್ಕದ್ದು.

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-04-277-0-04-ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ(117-ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹ-14000.00 ಲಕ್ಷಗಳು) ಯೋಜನೆಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
27/6/2024.
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.(ನಿರ್ದೇಶಕರ ಮುಖಾಂತರ)
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ,(ವೆಚ್ಚ-3&9) ವಿಧಾನಸೌಧ.ಬೆಂಗಳೂರು
5. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with OKEN Scanner